ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

2019-20ನೇ ಸಾಲಿನ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನ ಬಿಡುಗಡೆ ಕುರಿತು

ಶ್ರೀ ಕೆ. ವಿ. ನಾರಾಯಣಸ್ವಾಮಿ(ವಿಧಾನಸಭೆಯಿಂದ ಚುನಾಯಿತರಾದವರು) –

389 (457) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮೈಸೂರು ಜಿಲ್ಲೆಯಲ್ಲಿ 2019-20ನೇ ಸಾಲಿನಲ್ಲಿ ಪಿ.ಡಿ. ಖಾತೆಯಲ್ಲಿರುವ ಅನುದಾನವನ್ನು ಶಾಸಕರಿಗೆ 2.00 ಕೋಟಿಯವರೆಗೂ ಬಿಡುಗಡೆ ಮಾಡುವಂತೆ ಸೂಚಿಸಿ ಸರ್ಕಾರದಿಂದ ಪತ್ರ ಬರೆಯಲಾಗಿದೆಯೇ;

(ಆ) ಹಾಗಿದ್ದಲ್ಲಿ, ಇಲ್ಲಿಯವರೆಗೂ ಎಷ್ಟು ಶಾಸಕರು ನೀಡಿದ 2.00 ಕೋಟಿಯವರೆಗಿನ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ;

(ಇ) ಅನುದಾನ ಬಿಡುಗಡೆ ಮಾಡದಿದ್ದಲ್ಲಿ, ಕಾರಣಗಳೇನು;

(ಈ) ಅನುದಾನ ಕೊರತೆಯಿದ್ದಲ್ಲಿ, ಸರ್ಕಾರ ಸೂಚಿಸಿರುವಂತೆ ಅನುದಾನ ಬಿಡುಗಡೆ ಮಾಡುವಂತೆ ಕೋರಿ ಸರ್ಕಾರಕ್ಕೆ ಪತ್ರ ಬರೆಯಲಾಗಿದೆಯೇ; ಬರೆದಿದ್ದಲ್ಲಿ, ಸದರಿ ಪತ್ರಕ್ಕೆ ಸರ್ಕಾರದಿಂದ ಬಂದ ಉತ್ತರವೇನು;

(ಉ) ಪ್ರಸ್ತುತ ಪಿ.ಡಿ. ಖಾತೆಯಲ್ಲಿರುವ ಅನುದಾನವೆಷ್ಟು; ಪ್ರತಿ ಶಾಸಕರಿಗೆ 2.00 ಕೋಟಿಗಳ ಅನುದಾನ ಬಿಡುಗಡೆ ಮಾಡಲು ಕೊರತೆಯಿರುವ ಅನುದಾನದ ಮೊತ್ತವೆಷ್ಟು?